**Akashvani : Bangalore**
**National Bulletin In Kannada**
**18.10.2024 / 19.35 hrs**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**18.10.2024 / 19.35 hrs**

**<><*<><>*><>**

<u>ಮುಖ್ಯಾಂಶಗಳು</u>

೧. ಮಲಾವಿ ಅಧ್ಯಕ್ಷರೊಂದಿಗೆ ರಾಷ್ಟ್ರಪತಿ ದ್ರೌಪದಿ ಮುರ್ಮು ದ್ವಿಪಕ್ಷೀಯ ಮಾತುಕತೆ; ನಾಲ್ಕು ಒಪ್ಪಂದಗಳಿಗೆ ಭಾರತ-ಮಲಾವಿ ಸಹಿ

೨. ಇದೇ ೨೨ ರಿಂದ ಪ್ರಧಾನಿ ನರೇಂದ್ರ ಮೋದಿ ಎರಡು ದಿನಗಳ ರಷ್ಯಾ ಪ್ರವಾಸ; ೧೬ನೇ ಬ್ರಿಕ್ಸ್ ಶೃಂಗದಲ್ಲಿ ಭಾಗಿ

೩. ಜಲವಿದ್ಯುತ್ ವಲಯದಲ್ಲಿ ಭಾರತ-ಭೂತಾನ್ ಸಹಕಾರ ಮತ್ತಷ್ಟು ಬಲಪಡಿಸಲು ಉಭಯ ದೇಶಗಳು ಪರಸ್ಪರ ಒಪ್ಪಿಗೆ

೪. ಟೆಸ್ಟ್ ಕ್ರಿಕೆಟ್; ನ್ಯೂಜಿಲೆಂಡ್ ವಿರುದ್ಧ ಭಾರತ ೧೨೫ ರನ್‌ಗಳ ಹಿನ್ನಡೆ

**<><*<><>*><>**

ಮಲಾವಿಯಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಇಂದು ಮಲಾವಿ ಅಧ್ಯಕ್ಷ ಲಾಜರಸ್ ಚಕ್ವೇರಾ ಅವರೊಂದಿಗೆ ದ್ವಿಪಕ್ಷೀಯ ಮಾತುಕತೆ ನಡೆಸಿದರು. ಬಳಿಕ ಭಾರತ-ಮಲಾವಿ ನಡುವೆ ನಿಯೋಗ ಮಟ್ಟದ ಮಾತುಕತೆ ನಡೆಯಿತು. ಕಲೆ ಮತ್ತು ಸಂಸ್ಕೃತಿ, ಕ್ರೀಡೆ, ಯುವಜನ ಮತ್ತು ಔಷಧೀಯ ಕ್ಷೇತ್ರಗಳಲ್ಲಿ ನಾಲ್ಕು ತಿಳುವಳಿಕೆ ಪತ್ರಗಳಿಗೆ ಉಭಯ ದೇಶಗಳು ಸಹಿ ಹಾಕಿವೆ. ಭಾರತವು ೧ ಸಾವಿರ ಮೆಟ್ರಿಕ್ ಟನ್ ಅಕ್ಕಿಯನ್ನು ಮಲಾವಿಗೆ ಪೂರೈಸುವುದಾಗಿ ಘೋಷಿಸಿದೆ. ನಂತರ ರಾಷ್ಟ್ರಪತಿ ದ್ರೌಪದಿ ಮುರ್ಮು ಮಲಾವಿಯ ರಾಷ್ಟ್ರೀಯ ಯುದ್ಧ ಸ್ಮಾರಕಕ್ಕೂ ಭೇಟಿ ನೀಡಿದರು.

**<><*<><>*><>**

ದೆಹಲಿಯ ವಿಜ್ಞಾನ ಭವನದಲ್ಲಿ ಇಂದು ಆಯೋಜಿಸಲಾಗಿದ್ದ ರಾಷ್ಟ್ರೀಯ ಮಾನವ ಹಕ್ಕುಗಳ ಆಯೋಗದ ೩೧ನೇ ಸಂಸ್ಥಾಪನಾ ದಿನದ ಕಾರ್ಯಕ್ರಮದಲ್ಲಿ ಉಪರಾಷ್ಟ್ರಪತಿ ಜಗದೀಪ್ ಧನಕರ್ ಪಾಲ್ಗೊಂಡಿದ್ದರು. ಸಮಾರಂಭ ಉದ್ದೇಶಿಸಿ ಮಾತನಾಡಿದ ಅವರು, ಪ್ರಸಕ್ತ ವರ್ಷದ ಜಾಗತಿಕ ಮಾನವ ಹಕ್ಕುಗಳ ದಿನವನ್ನು 'ಸಮಾನತೆ-ಅಸಮಾನತೆಯ ನಿವಾರಣೆ ಮತ್ತು ಮಾನವ ಹಕ್ಕುಗಳ ಮುನ್ನಡೆ' ಎನ್ನುವ ವಿಷಯದ ಆಧಾರದ ಮೇಲೆ ಆಚರಿಸಲಾಗುತ್ತಿದೆ ಎಂದು ಹೇಳಿದ್ದಾರೆ. ಮಾನವ

ಸಂಕುಲ ಸಮಾನತೆಯ ತತ್ವದ ಮೇಲೆ ಸಾಗಬೇಕು ಎನ್ನುವ ಆಶಯದೊಂದಿಗೆ ರಾಷ್ಟ್ರೀಯ ಮಾನವ ಹಕ್ಕುಗಳ ಆಯೋಗವನ್ನು ಸ್ಥಾಪಿಸಲಾಗಿದೆ. ಧರ್ಮ, ಪಂಥ, ಬಣ್ಣ, ಲಿಂಗ ಸೇರಿದಂತೆ ಯಾವುದೇ ರೀತಿಯಲ್ಲಾಗುವ ಅಸಮಾನತೆ, ಮಾನವ ಹಕ್ಕುಗಳ ಮೌಲ್ಯಗಳಿಗೆ ಧಕ್ಕೆ ತರುವಂಥದ್ದಾಗಿದೆ ಎಂದರು. ರಾಷ್ಟ್ರೀಯ ಮಾನವ ಹಕ್ಕುಗಳ ಆಯೋಗ, ನಾಗರಿಕರ ಸಮಾನತೆಯನ್ನು ರಕ್ಷಣೆ ಮಾಡುವ ಮೌಲಿಕ ಸಂಸ್ಥೆಯಾಗಿದೆ. ಮತ್ತೊಬ್ಬರ ಹಕ್ಕುಗಳನ್ನು ಗೌರವಿಸುವುದರಿಂದ, ಸ್ವಂತ ಹಕ್ಕುಗಳನ್ನು ಗೌರವಿಸಿದಂತಾಗುತ್ತದೆ. ಮಾನವ ಹಕ್ಕುಗಳನ್ನು ಗೌರವಿಸುವುದು ಪ್ರತಿಯೊಬ್ಬರ ಕರ್ತವ್ಯವಾಗಿದೆ. ಒಕ್ಕೂಟ ತತ್ವ ಮತ್ತು ವಿಭಿನ್ನ ವಿಚಾರಧಾರೆಗಳಿಗೆ ಗೌರವ ನೀಡುವುದು ಅಗತ್ಯವಾಗಿದೆ ಎಂದು ಉಪರಾಷ್ಟ್ರಪತಿ ಹೇಳಿದರು.

ಧ್ವನಿ: ಉಪರಾಷ್ಟ್ರಪತಿ ಜಗದೀಪ್ ಧನಕರ್

<><*<><>*><>

ಪ್ರಧಾನಮಂತ್ರಿ ನರೇಂದ್ರ ಮೋದಿ ಇದೇ ೨೨ ರಿಂದ ಎರಡು ದಿನ ರಷ್ಯಾಗೆ ಭೇಟಿ ನೀಡಲಿದ್ದು, ೧೬ನೇ ಬ್ರಿಕ್ಸ್ ಶೃಂಗದಲ್ಲಿ ಪಾಲ್ಗೊಳ್ಳಲಿದ್ದಾರೆ ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ. ಪ್ರವಾಸದ ವೇಳೆ ಪ್ರಧಾನಿ ನರೇಂದ್ರ ಮೋದಿ, ಬ್ರಿಕ್ಸ್ ಸದಸ್ಯ ರಾಷ್ಟ್ರಗಳ ಪ್ರಧಾನಿಗಳ ಜತೆ ದ್ವಿಪಕ್ಷೀಯ ಮಾತುಕತೆ ನಡೆಸಲಿದ್ದು, ರಕ್ಷಣೆ, ತಂತ್ರಜ್ಞಾನ ಸೇರಿದಂತೆ ವಿವಿಧ ವಿಷಯಗಳ ಕುರಿತು ಸಂವಾದ ನಡೆಸಲಿದ್ದಾರೆ. ಜಾಗತಿಕ ಅಭಿವೃದ್ಧಿ ಮತ್ತು ಸುರಕ್ಷತೆಯ ಬಲವರ್ಧನೆ ಸೇರಿದಂತೆ ಜಾಗತಿಕ ಸಮಸ್ಯೆಗಳ ಕುರಿತು ಸಮಾಲೋಚನೆ ನಡೆಸುವ ಉದ್ದೇಶವನ್ನು ಹೊಂದಲಾಗಿದೆ ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ.

<><*<><>*><>

ಭೂತಾನ್‌ನ ಇಂಧನ ಮತ್ತು ನೈಸರ್ಗಿಕ ಸಂಪನ್ಮೂಲ ಸಚಿವ ಲಿಯಾನ್ಪೊ ಜೆಮ್ ತ್ಸೆರಿಂಗ್ ಅವರು ಇಂದು ನವದೆಹಲಿಯಲ್ಲಿ ಕೇಂದ್ರ ಇಂಧನ ಸಚಿವ ಮನೋಹರ್ ಲಾಲ್ ಅವರನ್ನು ಭೇಟಿಯಾಗಿ ಮಾತುಕತೆ ನಡೆಸಿದರು. ಜಲವಿದ್ಯುತ್ ವಲಯದಲ್ಲಿ ಉಭಯ ರಾಷ್ಟ್ರಗಳ ನಡುವಿನ ದೀರ್ಘಕಾಲದ ಸಹಕಾರವನ್ನು ಬಲಪಡಿಸುವ ಬಗ್ಗೆ ಸಭೆಯು ಗಮನಹರಿಸಿತು. ಪುನಾ-೧ ಜಲವಿದ್ಯುತ್ ಶಕ್ತಿ ಯೋಜನೆಯಿಂದ ಇಂಧನ ಉತ್ಪಾದನೆಯನ್ನು ಮತ್ತಷ್ಟು ಹೆಚ್ಚಿಸಲು ತಮ್ಮ ಸಹಯೋಗವನ್ನು ಹೆಚ್ಚಿಸುವ ಕುರಿತು ಎರಡೂ ಕಡೆಯವರು ಚರ್ಚಿಸಿದರು. ಭೂತಾನ್‌ನೊಂದಿಗೆ ಜಲವಿದ್ಯುತ್ ಅಭಿವೃದ್ಧಿಯನ್ನು ಮುಂದುವರೆಸುವ ಭಾರತದ ಬದ್ಧತೆಯನ್ನು ಸಚಿವ ಮನೋಹರ್ ಲಾಲ್ ಕಟ್ಟರ್ ಪುನರುಚ್ಚರಿಸಿದರು. ಭಾರತ ಮತ್ತು ಭೂತಾನ್ ಜಲವಿದ್ಯುತ್ ಕ್ಷೇತ್ರದಲ್ಲಿ ದೃಢವಾದ ಪಾಲುದಾರಿಕೆಯನ್ನು ಹಂಚಿಕೊಳ್ಳುತ್ತವೆ. ಹಲವಾರು ಪ್ರಮುಖ ಯೋಜನೆಗಳು ಭೂತಾನ್‌ನ ಆರ್ಥಿಕತೆಗೆ ಗಣನೀಯವಾಗಿ ಕೊಡುಗೆ ನೀಡುತ್ತವೆ ಮತ್ತು ಭಾರತಕ್ಕೆ ನವೀಕರಿಸಬಹುದಾದ

ಇಂಧನವನ್ನು ಒದಗಿಸುತ್ತವೆ. ಈ ಸಭೆಯು ದ್ವಿಪಕ್ಷೀಯ ಸಂಬಂಧಗಳನ್ನು ಗಾಢಗೊಳಿಸುವ ಮತ್ತು ಸುಸ್ಥಿರ ಇಂಧನ ಸಹಕಾರದ ಮೂಲಕ ಪ್ರಾದೇಶಿಕ ಇಂಧನ ಭದ್ರತೆಯನ್ನು ಹೆಚ್ಚಿಸುವಲ್ಲಿ ಮತ್ತೊಂದು ಹೆಜ್ಜೆಯಾಗಿದೆ ಎಂದು ನಮ್ಮ ಬಾತ್ಮೀದಾರರು ವರದಿ ಮಾಡಿದ್ದಾರೆ.

<><*<><>*><>

ಚುನಾವಣಾ ಆಯೋಗ ಜಾರ್ಖಂಡ್ ವಿಧಾನಸಭೆಯ ಮೊದಲ ಹಂತದ ಚುನಾವಣೆಗೆ ಅಧಿಸೂಚನೆ ಹೊರಡಿಸಿದೆ. ನಾಮಪತ್ರ ಸಲ್ಲಿಕೆ ಪ್ರಕ್ರಿಯೆ ಇಂದಿನಿಂದ ಆರಂಭವಾಗಿದ್ದು, ಇದೇ ೨೫ ಕೊನೆಯ ದಿನವಾಗಿದೆ. ಜಾರ್ಖಂಡ್ ವಿಧಾನಸಭೆಗೆ ನವೆಂಬರ್ ೧೩ ಹಾಗೂ ೨೦ರಂದು ಎರಡು ಹಂತಗಳಲ್ಲಿ ಚುನಾವಣೆ ನಡೆಯಲಿದೆ. ಇದೇ ವೇಳೆ, ಜಾರ್ಖಂಡ್ ವಿಧಾನಸಭಾ ಚುನಾವಣೆಗೆ ಎನ್‌ಡಿಎ ಮಿತ್ರಪಕ್ಷಗಳ ನಡುವೆ ಸೀಟು ಹಂಚಿಕೆ ಸೂತ್ರವನ್ನು ಪ್ರಕಟಿಸಲಾಗಿದೆ. ಬಿಜೆಪಿ ೬೮ ಸ್ಥಾನಗಳಲ್ಲಿ ಸ್ಪರ್ಧಿಸಲಿದ್ದು, ಎಜೆಎಸ್‌ಯು ಪಕ್ಷಕ್ಕೆ ೧೦ ಸ್ಥಾನಗಳನ್ನು ನೀಡಲಾಗಿದೆ. ಜೆಮ್ಶೆಡ್‌ಪುರ ಪಶ್ಚಿಮ ಮತ್ತು ತಮರ್ - ಎರಡು ವಿಧಾನಸಭಾ ಕ್ಷೇತ್ರಗಳನ್ನು ಜೆಡಿಯು ಗೆ ಹಾಗೂ ಚತ್ರ ವಿಧಾನಸಭಾ ಕ್ಷೇತ್ರವನ್ನು ಚಿರಾಗ್ ಪಾಸ್ವಾನ್ ನೇತೃತ್ವದ ಎಲ್‌ಜೆಪಿಗೆ ನೀಡಲಾಗಿದೆ ಎಂದು ಬಿಜೆಪಿಯ ಜಾರ್ಖಂಡ್ ಚುನಾವಣಾ ಸಹ-ಪ್ರಭಾರಿ ಹಿಮಂತ ಬಿಸ್ವಾ ಶರ್ಮಾ ಮಾಹಿತಿ ನೀಡಿದ್ದಾರೆ.

<><*<><>*><>

ಅಕ್ರಮ ಹಣ ವರ್ಗಾವಣೆ ಪ್ರಕರಣದಲ್ಲಿ ಜೈಲು ಸೇರಿರುವ ಆಪ್ ನಾಯಕ ಮತ್ತು ದೆಹಲಿ ಮಾಜಿ ಸಚಿವ ಸತ್ಯೇಂದ್ರ ಜೈನ್ ಅವರಿಗೆ ದೆಹಲಿಯ ರೋಸ್ ಅವೆನ್ಯೂ ನ್ಯಾಯಾಲಯ ಇಂದು ಜಾಮೀನು ಮಂಜೂರು ಮಾಡಿದೆ. ೨೦೨೨ರ ಮೇ ೩೦ರಂದು ಜಾರಿ ನಿರ್ದೇಶನಾಲಯ, ಸತ್ಯೇಂದ್ರ ಜೈನ್ ಅವರನ್ನು ಬಂಧಿಸಿತ್ತು. ಸತ್ಯೇಂದ್ರ ಜೈನ್ ಅವರಿಗೆ ಸಂಬಂಧಿಸಿದ ನಾಲ್ಕು ಕಂಪನಿಗಳಿಂದ ಅಕ್ರಮ ಹಣ ವರ್ಗಾವಣೆಯಾಗಿದೆ ಎಂದು ಜಾರಿ ನಿರ್ದೇಶನಾಲಯ ಆರೋಪಿಸಿದೆ.

<><*<><>*><>

ದೆಹಲಿಯಲ್ಲಿಂದು ಆಯೋಜಿಸಲಾಗಿದ್ದ ಡಿಆರ್‌ಡಿಒ ಕೈಗಾರಿಕಾ ಕಾರ್ಯಾಗಾರದಲ್ಲಿ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಪಾಲ್ಗೊಂಡಿದ್ದರು. ಈ ವೇಳೆ ಮಾತನಾಡಿದ ಅವರು, ವಿಭಿನ್ನ ತಂತ್ರಜ್ಞಾನಗಳು ಇಂದು ವೇಗವಾಗಿ ಅಭಿವೃದ್ಧಿಯಾಗುತ್ತಿದ್ದು, ಪರಿವರ್ತನೆಗೆ ಕಾರಣವಾಗಿವೆ. ರಕ್ಷಣಾ ವಲಯ ಕೂಡ ತಂತ್ರಜ್ಞಾನದಿಂದ ವ್ಯಾಪಕ ಪರಿವರ್ತನೆ ಹೊಂದುತ್ತಿದೆ ಎಂದು ಹೇಳಿದ್ದಾರೆ. ರಕ್ಷಣಾ ತಂತ್ರಜ್ಞಾನದ ಬಳಕೆಯನ್ನು ಹೆಚ್ಚಿಸುವ ಅಗತ್ಯವಿದೆ. ಪ್ರಸಕ್ತ ಸನ್ನಿವೇಶದಲ್ಲಿ, ಸಾಂಪ್ರದಾಯಿಕ ಯುದ್ಧ ಮಾದರಿಯಲ್ಲಿ ಭಾರೀ ಬದಲಾವಣೆಯಾಗಿದೆ. ಭೂಮಿ, ಸಮುದ್ರ, ವಾಯು, ಯುದ್ಧ ಸಲಕರಣೆಗಳಲ್ಲಿ ಅಭೂತಪೂರ್ವ ಸಾಧನೆಯಾಗಿದೆ. ಹೊಸ ತಂತ್ರಜ್ಞಾನಗಳು, ಅಸಾಂಪ್ರದಾಯಿಕ ಮಾದರಿಯ ಯುದ್ಧ ಶೈಲಿಗೆ ಚಾಲನೆ ನೀಡಿವೆ ಎಂದರು.

ದೇಶದ ರಕ್ಷಣಾ ಕ್ಷೇತ್ರದಲ್ಲಿ, ಖಾಸಗಿ ವಲಯ ನೇತೃತ್ವ ವಹಿಸಬೇಕಿದೆ. ಹೊಸ ವಿಧಾನಗಳನ್ನು ಸೃಷ್ಟಿಸುವ ಸಾಮರ್ಥ್ಯವನ್ನು, ಖಾಸಗಿ ವಲಯ ಹೊಂದಿದೆ. ಪ್ರಸ್ತುತ ರಕ್ಷಣಾ ವಲಯಕ್ಕೆ ಸಂಶೋಧನಾ ಕ್ಷೇತ್ರ, ನವೋದ್ಯಮ, ಶೈಕ್ಷಣಿಕ ವಲಯಗಳು ಉತ್ತಮ ಕೊಡುಗೆ ನೀಡುತ್ತಿವೆ ಎಂದು ಹೇಳಿದರು. ನಿರಂತರವಾಗಿ ಮುಂದುವರಿಯುವಂತಹ ಹಾಗೂ ವಿನಾಶಕಾರಿ ಮಾದರಿಯ ತಂತ್ರಜ್ಞಾನಗಳು ಇಂದು ಅಸ್ತಿತ್ವದಲ್ಲಿವೆ. ಎರಡೂ ಮಾದರಿಯನ್ನು ಭಾರತ ಅಳವಡಿಸಿಕೊಳ್ಳುವ ಅಗತ್ಯವಿದೆ ಎಂದು ರಾಜನಾಥ್ ಸಿಂಗ್ ಅಭಿಪ್ರಾಯಪಟ್ಟರು.

<><*<><>*><>

ಬೆಂಗಳೂರಿನ ಎಂ.ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ಭಾರತ- ನ್ಯೂಜಿಲ್ಯಾಂಡ್ ನಡುವಿನ ಟೆಸ್ಟ್ ಸರಣಿಯ ಮೊದಲ ಪಂದ್ಯದ ೩ನೇ ದಿನದಾಟದ ಅಂತ್ಯಕ್ಕೆ ಭಾರತ ತಂಡ, ೩ ವಿಕೆಟ್ ನಷ್ಟಕ್ಕೆ ೨೩೧ ರನ್ ಮಾಡಿದೆ. ಈ ಮೂಲಕ ನ್ಯೂಜಿಲೆಂಡ್ ತಂಡಕ್ಕಿಂತ ೧೨೫ ರನ್‌ಗಳ ಹಿನ್ನಡೆಯಲ್ಲಿದೆ.

<><*<><>*><>

ಮುಂಬೈ ಷೇರು ಮಾರುಕಟ್ಟೆಯಲ್ಲಿಂದು ಷೇರು ಸಂವೇದಿ ಸೂಚ್ಯಂಕ-ಸೆನ್ಸೆಕ್ಸ್ ೨೧೮ ಅಂಕಗಳು ಏರಿಕೆಯಾಗಿದ್ದು, ದಿನದ ಅಂತ್ಯಕ್ಕೆ ೮೧ ಸಾವಿರದ ೨೨೪ ಅಂಕಗಳು ದಾಖಲಾಗಿದೆ. ಇದೇ ವೇಳೆ ರಾಷ್ಟ್ರೀಯ ಸಂವೇದಿ ಸೂಚ್ಯಂಕ-ನಿಫ್ಟಿ ೧೦೪ ಅಂಕಗಳು ಏರಿಕೆ ಕಂಡಿದ್ದು, ದಿನದ ಅಂತ್ಯಕ್ಕೆ ೨೪ ಸಾವಿರದ ೮೫೦ ಅಂಕಗಳು ದಾಖಲಾಗಿದೆ. ಅಮೆರಿಕನ್ ಡಾಲರ್ ಎದುರು ಭಾರತೀಯ ರೂಪಾಯಿ ಮೌಲ್ಯ ೮೪ ರೂಪಾಯಿ ೭ ಪೈಸೆಯಷ್ಟಾಗಿದೆ.

<><*<><>*><>

ಮುಂದಿನ ೩ ರಿಂದ ೪ ದಿನಗಳ ಕಾಲ ಕರ್ನಾಟಕ, ಕೇರಳ, ಮಾಹೆ ಮತ್ತು ಲಕ್ಷದ್ವೀಪದ ಹಲವೆಡೆ ಭಾರೀ ಮಳೆಯಾಗಲಿದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಇದೇ ವೇಳೆ ತಮಿಳುನಾಡು, ಗೋವಾ, ಮಹಾರಾಷ್ಟ್ರ, ಪುದುಚೆರಿ, ತೆಲಂಗಾಣ ಮತ್ತು ಆಂಧ್ರ ಪ್ರದೇಶದ ಕರಾವಳಿಯ ಹಲವು ಪ್ರದೇಶಗಳಲ್ಲಿ ಮುಂದಿನ ಒಂದು ವಾರದ ಕಾಲ ಸಾಧಾರಣ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೭.೩೫ ಕ್ಕೆ <>*><>